ವಿಚಾರಣಾಧಿಕಾರಿಗಳು ವಿಚಾರಣೆಯನ್ನು ಪೂರ್ಣಗೊಳಿಸಲು ಕಾಲಕಾಲಕ್ಕೆ ಕಾಲಾವಕಾಶವನ್ನು ವಿಸ್ತರಿಸಲು ಕೋರಿದ್ದರ ಮೇರೆಗೆ ವಿಚಾರಣಾ ಅವಧಿಯನ್ನು ಅಂತಿಮವಾಗಿ ದಿನಾಂಕ 2.10.2011ರವರೆಗೆ ವಿಸ್ತರಿಸಲಾಗಿರುತ್ತದೆ. ವಿಸ್ತೃತ ಅವಧಿಯೊಳಗೆ ವಿಚಾರಣೆ ಪೂರ್ಣಗೊಳಿಸಿ ವರದಿ ಸಲ್ಲಿಸಲು ದಿನಾಂಕ 24.6.2011ರ ಪತ್ರದಲ್ಲಿ ಆದೇಶಿಸಲಾಗಿತ್ತು.

ಆದರೆ, ಈ ವಿಚಾರಣೆಗೆ ಸಂಬಂಧಿಸಿದಂತೆ ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಎರಡು ರಿಟ್ ಅರ್ಜಿಗಳು ರಿಟ್ ಅರ್ಜಿ ಸಂಖ್ಯೆ 67173-76/2010 ಮತ್ತು 68969-74/2011 ಹಾಗೂ ರಿಟ್ ಅಪೀಲು ಸಂಖ್ಯೆ: 6079-88/2011ರ ಪ್ರಕರಣಗಳಲ್ಲಿ ನ್ಯಾಯಾಲಯವು ನೀಡಿದ ಆದೇಶಗಳನ್ನು ಪಾಲಿಸುವಲ್ಲಿ ದಿನಾಂಕ 9.12.2010ರಿಂದ 13.9.2011ರವರೆಗೆ ವಿಚಾರಣಾ ಪ್ರಕ್ರಿಯೆಯು ಸ್ಥಗಿತಗೊಂಡಿತ್ತು.

ಇವುಗಳನ್ನು ಪರಿಗಣಿಸಿ ಪುನಃ ನಾಲ್ಕು ತಿಂಗಳ ಅಂದರೆ ದಿನಾಂಕ 3.10.2011 ರಿಂದ ದಿನಾಂಕ 2.2.2012ರವರೆಗೆ ಕಾಲಾವಕಾಶವನ್ನು ವಿಸ್ತರಿಸಬೇಕೆಂದು ವಿಚಾರಣಾಧಿಕಾರಿಗಳು ಪತ್ರ ಬರೆದು ಕೋರಿದ್ದು, ಕರ್ನಾಟಕ ಸಹಕಾರಿ ಸಂಘಗಳ ಕಾಯ್ದೆ 1959ರ ಕಲಂ 64(2)(ಎ) ರೀತ್ಯಾ ದತ್ತವಾದ ಅಧಿಕಾರದಂತೆ ವಿಚಾರಣಾ ಅವಧಿಯನ್ನು ದಿನಾಂಕ 3.10.2011ರಿಂದ ದಿನಾಂಕ 2.2.2012ರವರೆಗೆ ವಿಸ್ತರಿಸುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆ.

(ಇ) ವಿಚಾರಣಾ ವರದಿಯ ಆಧಾರದಲ್ಲಿ ಮುಂದಿನ ಕ್ರಮವನ್ನು ಕೈಗೊಳ್ಳಲಾಗುವುದು.

**ಕಿತ್ತೂರನ್ನು ಪಟ್ಟಣ ಪಂಚಾಯತಿಯನ್ನಾಗಿ ಮಾಡುವುದು**

**300(229) ಶ್ರೀ ಮಾರಿಹಾಳ್ ಸುರೇಶ್ ಶಿವರುದ್ರಪ್ಪ (ಕಿತ್ತೂರು)** ಮಾನ್ಯ ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು ದಯೆಯಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:-

(ಅ) 41 ಸದಸ್ಯರನ್ನು ಹೊಂದಿದ ಕಿತ್ತೂರು ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯತಿಯನ್ನಾಗಿ ಪರಿವರ್ತಿಸುವ ವಿಚಾರ ಸರ್ಕಾರದ ಮುಂದಿದೆಯೇ;

(ಆ) ಹಾಗಾದರೆ ಪಟ್ಟಣ ಪಂಚಾಯತಿಯನ್ನು ಯಾವಾಗ ಪರಿವರ್ತಿಸಲಾಗುವುದು;

**ಶ್ರೀ ಬಾಲಚಂದ್ರ ಲ.ಜಾರಕಿಹೊಳಿ** (ಪೌರಾಡಳಿತ, ಸ್ಥಳೀಯ ಸಂಸ್ಥೆಗಳು ಹಾಗೂ ಸಾರ್ವಜನಿಕ ಉದ್ದಿಮೆಗಳ ಸಚಿವರು)

(ಅ) ಇಲ್ಲ

(ಆ) 2011ರ ಜನಗಣತಿ ಕಾರ್ಯ ಮುಗಿದಿರುತ್ತದೆ. ಆದರೆ ಕೇಂದ್ರ ಸರ್ಕಾರದ ರಿಜಿಸ್ಟ್ರಾರ್ ಜನರಲ್ ಹಾಗೂ ಜನಗಣತಿ ಆಯುಕ್ತರು ನಗರ ಹಾಗೂ ಗ್ರಾಮೀಣ ಸ್ಥಳೀಯ ಸಂಸ್ಥೆಗಳ ಜನಗಣತಿಯ ಅಂಕಿ-ಅಂಶಗಳನ್ನು ಅಧಿಕೃತವಾಗಿ ಪ್ರಕಟಿಸಿರುವುದಿಲ್ಲ. ಅಧಿಕೃತವಾಗಿ ಪ್ರಕಟಿಸಿದ ನಂತರ ಕಿತ್ತೂರು ಗ್ರಾಮ ಪಂಚಾಯತಿಯನ್ನು ಪಟ್ಟಣ ಪಂಚಾಯತಿಯನ್ನಾಗಿ ಪರಿವರ್ತಿಸುವ ಬಗ್ಗೆ ಕರ್ನಾಟಕ ಪುರಸಭೆ ಕಾಯ್ದೆ 1964ರ ಕಲಂ 3,9 ಮತ್ತು 349ರನ್ವಯ ನಿಯಮಾನುಸಾರ ಪರಿಶೀಲಿಸಲಾಗುವುದು.

**2001-22ನೇ C.R.F. ಯೋಜನೆಯಲ್ಲಿ ರಾಜ್ಯಕ್ಕೆ ಬಿಡುಗಡೆಯಾಗಿರುವ ಹಣ**

**ಶ್ರೀ ಮುನಿಯಪ್ಪ ವಿ. (ಶಿಡ್ಲಘಟ್ಟ):-**

301 (234) ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಕೇಂದ್ರ ಸರ್ಕಾರದಿಂದ 2009-10 ಮತ್ತು 2010-11ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಸಿ.ಆರ್.ಎಫ್. ನಿಧಿಯಿಂದ ರಾಜ್ಯಕ್ಕೆ ಮಂಜೂರಾಗಿರುವ ಒಟ್ಟು ಹಣ ಎಷ್ಟು;

(ಆ) ಸಿ.ಆರ್.ಎಫ್. ಯೋಜನೆ ಅಡಿಯಲ್ಲಿ ಮಂಜೂರಾಗಿರುವ ಕಾಮಗಾರಿಗಳು ಎಷ್ಟು (ಜಿಲ್ಲಾವಾರು ವರದಿ ನೀಡುವುದು);

(ಇ) ಈ ಪೈಕಿ ಕಾಮಗಾರಿಗಳು ಪೂರ್ಣಗೊಂಡಿದ್ದು, ಗುತ್ತಿಗೆದಾರರಿಗೆ ಹಣ ಪಾವತಿಯಾಗದೇ ಮುಂದಿನ ಅಭಿವೃದ್ಧಿಯ ಪ್ರಗತಿ ಕುಂಠಿತವಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಚಿಕ್ಕಬಳ್ಳಾಪುರ ಜಿಲ್ಲೆಗೆ ಹಣ ಯಾವಾಗ ಬಿಡುಗಡೆ ಮಾಡಲಾಗುತ್ತದೆ?

**ಶ್ರೀ ಸಿ. ಎಂ. ಉದಾಸಿ (ಮಾನ್ಯ ಲೋಕೋಪಯೋಗಿ ಸಚಿವರು):-**

(ಅ) ಕೇಂದ್ರ ಸರ್ಕಾರದಿಂದ 2009-10 ಮತ್ತು 2010-11ನೇ ಸಾಲಿನಲ್ಲಿ ಕೇಂದ್ರ ಸರ್ಕಾರದ ಸಿ.ಆರ್.ಎಫ್. ನಿಧಿಯಿಂದ ಬಿಡುಗಡೆಯಾದ ಅನುದಾನದ ವಿವರಗಳು ಕೆಳಕಂಡಂತಿವೆ;